ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು

ಕೃಷಿ ಹವಾಮಾನ ವಿಭಾಗ, ಜಿ.ಕೆ.ವಿ.ಕೆ, ಬೆಂಗಳೂರು–65

ತುರುವೇಕೆರೆ ಕೃಷಿ ಹವಾಮಾನ ಮುನ್ಸೂಚನೆ

ದಿನಾಂಕ: 29.1.16

ಈ ವಾರದ ಮುನ್ಸೂಚನೆ (30-1-16 to 3.2.16 ವರೆಗೆ)

ನಿಯತಾಂಕಗಳು	30/1/16	31/1/16	1/2/16	2/2/16	3/2/16
ಮಳೆ (ಮಿ ಮಿ)	0	0	0	0	0
ಗರಿಷ್ಠ ಉಷ್ಣಾಂಶ(ಡಿ.ಸೆ.)	31	29	31	31	31
ಕನಿಷ್ಠ ಉಷ್ಣಾಂಶ (ಡಿ.ಸೆ.)	15	14	16	15	15
ಮೋಡ (ಪ್ರಮಾಣ)	3	3	1	1	1
ಅರ್ದ್ರತೆ ೭.೨೦ ಬೆ (ಶೇ)	98	99	81	64	53
ಅರ್ದ್ರತೆ ೨.೨೦ ಮ (ಶೇ)	29	31	19	15	14
ಗಾಳಿಯ ವೇಗ (ಕಿ.ಮಿ/ಗಂಟೆಗೆ)	4	8	12	10	9
ಗಾಳಿಯ ದಿಕ್ಕು (ಡಿಗ್ರಿ)	126	80	96	114	112

ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆಯ ಪ್ರಕಾರ ತುರುವೇಕೆರೆ ಹಾಗೂ ಸುತ್ತಮುತ್ತ ಮುಂದಿನ ನಾಲ್ಕೈದು ದಿನಗಳಲ್ಲಿ ಮೋಡ ಕವಿದ ವಾತಾವರಣ ಇರಲಿದೆ. ದಿನದ ಗರಿಷ್ಠ ಉಷ್ಣಾಂಶವು 29-31°C ಮತ್ತು ಕನಿಷ್ಠ 14-16°C ಇರಲಿದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ 53-99% ಇದ್ದು, ಮಧ್ಯಾಹ್ನ 14-31 % ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ 9-12 ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

- ✓ ಜಾನುವಾರು: ಕೊಟ್ಟಿಗೆಯನ್ನು ಶುಚಿಯಾಗಿ ಇಟ್ಟುಕೊಳ್ಳುವುದು ಮತ್ತು ಜಾನುವಾರುಗಳನ್ನು ಚಳಿಗಾಳಿಯಿಂದ ರಕ್ಷಿಸಬೇಕು. ಜಾನುವಾರು, ರೇಷ್ಮೆ ಹಾಗೂ ಕೋಳಿ ಸಾಕಣೆ ಕೊಠಡಿಯ ಉಷ್ಣಾಂಶದ ಸ್ಥಿರತೆಯನ್ನು ಕಾಪಾಡಿಕೊಳ್ಳುವುದು.
- ✓ ಗಾಳಿಯ ವೇಗ ಜಾಸ್ತಿಇರುವುದರಿಂದ ತರಕಾರಿ ಬೆಳೆಗಳಿಗೆ ನೆರವು ಕೊಟ್ಟು ನೆಲಕ್ಕೆ ತಾಕದಂತೆ ಎಚ್ಚರವಹಿಸಿ.

ಸಸ್ಯ ಸಂರಕ್ಷಣೆ:

- ✓ **ಟೊಮ್ಯಾಟೊ: ಅಂಗಮಾರಿ ರೋಗವಿದ್ದರೆ ಮೆಟಲಾಕ್ಸಿಲ್ (೨ಗ್ರಾಂ ಪ್ರತಿ ಲೀ ಗೆ) ಸಿಂಪಡಿಸಬೇಕು**
- ✓ **ರಸ ಹೀರುವ ಕೀಟಗಳು ಕಂಡು ಬಂದರೆ ಬೇವಿನ ಕಷಾಯ (ಶೇ.೫) ಅಥವಾ ಬೇವಿನ ಎಣ್ಣೆ ಅಥವಾ ಇಮಿಡಕ್ಲೋಪ್ರಿಡ್ ಸಿಂಪಡಿಸಬಹುದು.**

ಮಾವಿನ ಬೆಳೆಗೆ ವಿಶೇಷ ಕೃಷಿ ಹವಾಮಾನ ಸಲಹೆಗಳು:

- ✓ ಕಳೆದ ಒಂದು ತಿಂಗಳಿನಿಂದ ಶುಷ್ಕ ವಾತಾವರಣವಿರುವುದರಿಂದ ಮಾವು ಬೆಳೆಯಲ್ಲಿ ಹೂ ಬಿಡುವ ಸಂಖ್ಯೆ ಹೆಚ್ಚಿದ್ದು ಮತ್ತು ಬೂದಿರೋಗದ ಸಂಭವ ಹೆಚ್ಚಾಗಿ ಕಂಡುಬಂದಿರುತ್ತದೆ.

- ✓ ಹೂ ಬಿಡುವುದಕ್ಕೆ ಮುಂಚೆ ಹಾಗೂ ಕಾಯಿ ಕಚ್ಚಿದ ಕೂಡಲೇ ಕಂಡುಬರುವ ಜಿಗಿಹುಳು ನಿಯಂತ್ರಣಕ್ಕಾಗಿ ಗಿಡಗಳಿಗೆ 4ಗ್ರಾಂ ಕಾರ್ಬರಿಲ್ (50 wp) ಅಥವಾ 0.3 ಮಿ.ಲೀ ಇಮಿಡಾಕ್ಲೋಪ್ರಿಡ್ 200.ಎಸ್.ಎಲ್ ಅಥವಾ 0.5 ಮಿ.ಲೀ ಲ್ಯಾಂಡಾಸೈಯೋಲೋಥ್ರಿನ್ (5 ಇಸಿ) ಸಿಂಪಡಿಸಬೇಕು.

- ✓ ಜೊತೆಗೆ ಬೂದಿ ರೋಗದ ನಿಯಂತ್ರಣಕ್ಕಾಗಿ ನೀರಿನಲ್ಲಿ ಕರಗುವ ಗಂಧಕ (ಸಲ್ ಟಾಫ್ 80wp) 3ಗ್ರಾಂ. ಪ್ರತಿ ಲೀಟರ್ ನೀರಿನಲ್ಲಿ ಮಿಶ್ರ ಮಾಡಿ ಸಿಂಪಡಿಸಿ.

- ✓ ಜಿಗಿಹುಳುವಿನ ಹಾವಳಿ ತೀವ್ರವಾಗಿದ್ದಲ್ಲಿ ಅಝಾಡಿರೆಕ್ಟಿನ್ (10,000 ಪಿ.ಪಿ.ಎಮ್) 7 ಮಿ.ಲೀ/ಲೀ ನೀರಿನಲ್ಲಿ ಸಿಂಪಡಿಸಿ.

- ✓ ಬದನಿಕೆ ಪರಾವಲಂಬಿ ಸಸ್ಯ ಬೆಳೆದಿರುವ ಕೊಂಬೆಯನ್ನು ಪೂರ್ತಿ ಕತ್ತರಿಸಿ ತೆಗೆಯಿರಿ. ಕತ್ತರಿಸಿದ ಭಾಗಕೆ ತಾಮ್ರದ ಆಕ್ಸಿ ಕ್ಲೋರೈಡ್ ಶಿಲೀಂಧ್ರನಾಶಕ ದ್ರಾವಣ ಅಥವಾ ಬೋರ್ಡೊ ಮುಲಾಮನ್ನು ಲೇಪಿಸಬೇಕು.

- ✓ ಮಾವಿನ ಮರದ ಕೆಳಗೆ ಬೆಳೆದಿರುವ ಕಳೆಗಿಡಗಳನ್ನು ಕಡಿದುಹಾಕಿ ಸ್ವಚ್ಚಗೊಳಿಸಬೇಕು.

- ✓ ಭೂಮಿಗೆ ತಾಕುವ ರೆಂಬೆ ಕೊಂಬೆಗಳನ್ನು ಕತ್ತರಿಸಿ ಕೀಟ ಮತ್ತು ರೋಗಗಳಿಂದ ರಕ್ಷಿಸುವುದು.

- ✓ ಮಾವಿನ ಗಿಡದ ಕೆಳಗೆ ಬೆಳೆದಿರುವ ಹುತ್ತಗಳನ್ನು ನಾಶಪಡಿಸಬೇಕು ಮತ್ತು ಗೆದ್ದಲು ಹುಳುಗಳನ್ನು ನಾಶಪಡಿಸಲು ಕ್ಲೋರೊಪೈರಿಫಾಸ್ 5–10 ಮಿ.ಲೀ/ಪ್ರತಿ ಲೀ ನೀರಿಗೆ ಬೆರಸಿ ಹುತ್ತಗಳಿಗೆ ಸುರಿಯಬೇಕು ಅಥವಾ ಒಂದು ಮೀಟರ್ ಸುತ್ತಳತೆ ಇರುವ ಹುತ್ತಕ್ಕೆ 2 ಅಲ್ಯೂಮಿನಿಯಂ ಪಾಸ್ಫೈಡ್ ಮಾತ್ರೆಗಳನ್ನು ಹಾಕಿ ಗಾಳಿ ಹೊರ ಹೋಗದಂತೆ ಎಲ್ಲಾ ರಂಧ್ರಗಳನ್ನು ಹಸಿ ಮಣ್ಣಿನಿಂದ ಮುಚ್ಚಬೇಕು.

- ✓ ಹೂ ಹೆಚ್ಚಾಗಲು ನೈಟ್ರೊಬೆಂಜಿನ್‌ನನ್ನು ನಿಯಮಿತವಾಗಿ (35% ನೈಟ್ರೊಬೆಂಜಿನ್‌ನನ್ನು 2–3ಮಿ.ಲೀ) ಸಿಂಪಡಿಸಬೇಕು

ನೋಡಲ್ ಅಧಿಕಾರಿ:
ಕೃಷಿ ಹವಾಮಾನ ವಿಭಾಗ
ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು